**<u>ವಿದ್ಯಾರ್ಹತೆ:</u>**

ಯು.ಜಿ.ಸಿ. ಇಂದ ಮಾನ್ಯತೆ ಪಡೆದಿರುವ ಅಂಗೀಕೃತ ವಿಶ್ವವಿದ್ಯಾಲಯದಲ್ಲಿ ಪದವಿ ಅಥವಾ ತತ್ಸಮಾನ ಪದವಿಯನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕ, ಅಂದರೆ 28.08.2019ಕ್ಕೆ ಹೊಂದಿರಬೇಕು. (ಮಾಜಿ ಸೈನಿಕ ಅಭ್ಯರ್ಥಿಗಳು ಸೈನ್ಯದಲ್ಲಿ ನೀಡಿದ ಪದವಿ ಪ್ರಮಾಣ ಪತ್ರವನ್ನು ದಿನಾಂಕ: 28.08.2019 ರೊಳಗೆ ಪಡೆದಿದ್ದರೆ ಅಂತಹ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ಪರಿಗಣಿಸಲಾಗುವುದು).

**ಎ) ಸೇವಾನಿರತ ಅಭ್ಯರ್ಥಿಗಳಿಗೆ ವಿದ್ಯಾರ್ಹತೆ ಮತ್ತು ಅನುಭವ:**

ಅಂಗೀಕೃತ ವಿಶ್ವವಿದ್ಯಾಲಯದಲ್ಲಿ ಪದವಿ ಅಥವಾ ತತ್ವಮಾನ ಪದವಿ ಜೊತೆಯಲ್ಲಿ ಪೊಲೀಸ್ ಇಲಾಖೆಯ ಯಾವುದೇ ವೃಂದದಲ್ಲಿ 5 ವರ್ಷಗಳ ಕನಿಷ್ಟ ಸೇವೆಯನ್ನು (ಅರ್ಜಿ ಸಲ್ಲಿಸುವ ಕೊನೆಯ ದಿನಾಂಕ ಅಂದರೆ 28.08.2019ಕ್ಕೆ ಹೊಂದಿರಬೇಕು) ಸಹಾಯಕ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ / ಹೆಡ್ ಕಾನ್ಸ್‌ಟೇಬಲ್ / ಪೊಲೀಸ್ ಕಾನ್ಸ್‌ಟೇಬಲ್ ಆಗಿ ಪೂರ್ಣಗೊಳಿಸಿರಬೇಕು. (ಸೇವಾನಿರತ ಅಭ್ಯರ್ಥಿಗಳು ಅಧಿಸೂಚನೆಯ ಪುಟ ಸಂಖ್ಯೆ 22 ಮತ್ತು 23 ರಲ್ಲಿರುವ ಅನುಬಂಧ– 'ಎ' & 'ಬಿ' ಯನ್ನು ಕಡ್ಡಾಯವಾಗಿ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕ ಅಂದರೆ 28.08.2019 ರೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು).

**<u>ಟಿಪ್ಪಣಿ:</u>**

ಎ) ಮೇಲೆ ನಮೂದಿಸಿರುವ ವಿದ್ಯಾರ್ಹತೆ ಹಾಗೂ ಅನುಭವವನ್ನು ಹೊಂದದೇ ಇರುವ ಅಭ್ಯರ್ಥಿಗಳು ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸಿದ್ದು, ನಂತರ ನಿಗದಿಪಡಿಸಲಾದ ವಿದ್ಯಾರ್ಹತೆ ಮತ್ತು ಅನುಭವವನ್ನು ಹಾಗೂ ಅಂಕಪಟ್ಟಿ ಹೊಂದಿರುವುದಿಲ್ಲವೆಂದು ನೇಮಕಾತಿ ಸಮಿತಿಗೆ ಪತ್ತೆಯಾದಲ್ಲಿ ಅಂತಹ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ಯಾವುದೇ ಹಂತದಲ್ಲಾದರೂ ರದ್ದುಪಡಿಸಲಾಗುವುದು.

ಬಿ) ಡಿಪ್ಲೊಮಾ ಇತ್ಯಾದಿ ವಿದ್ಯಾರ್ಹತೆಗಳು ಪದವಿಗೆ ಸಮಾನವಾಗುವುದಿಲ್ಲ. ಆದ್ದರಿಂದ ಸಬ್–ಇನ್ಸ್‌ಪೆಕ್ಟರ್ ಹುದ್ದೆಗೆ ಈ ವಿದ್ಯಾರ್ಹತೆಯ ಅಭ್ಯರ್ಥಿಗಳು ಅರ್ಹರಾಗುವುದಿಲ್ಲ.

ಸಿ) ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ನಿಗದಿತ ವಿದ್ಯಾರ್ಹತೆಯಾದ ಪದವಿಯನ್ನು ಪಡೆಯಲು ಪರೀಕ್ಷೆ ಬರೆದು ಫಲಿತಾಂಶಕ್ಕಾಗಿ ಕಾಯುತ್ತಿರುವ ಅಭ್ಯರ್ಥಿಗಳು ಹಾಗೂ ಅಂಕಪಟ್ಟಿ ಇಲ್ಲದೆ ಇರುವ ಅಭ್ಯರ್ಥಿಗಳು ಅರ್ಜಿಗಳನ್ನು ಸಲ್ಲಿಸಲು ಅರ್ಹರಾಗಿರುವುದಿಲ್ಲ. ಮೇಲಿನ ವಿದ್ಯಾರ್ಹತೆಯನ್ನು ಹೊರತುಪಡಿಸಿ ಬೇರೆ ಯಾವ ವಿದ್ಯಾರ್ಹತೆಯನ್ನೂ ಪರಿಗಣಿಸಲಾಗುವುದಿಲ್ಲ.